32 Karavali School of Nursing,
Karavali College Building,
N.H. 17, Near Kotara Chowki Junction,
Mangalore-13.

33 B.A. School of Nursing,
Bantwal Taluk, Tumbe,
Mangalore

ರಾಜೀವ್ ಗಾಂಧಿ ವಿದ್ಯುದ್ದೀಕರಣ ಯೋಜನೆಯಡಿಯಲ್ಲಿ ಬಿಪಿಎಲ್ ಕಾರ್ಡು ಹಾಗೂ ಇತರರಿಗೆ ವಿದ್ಯುತ್ ಸಂಪರ್ಕ ಕಲ್ಪಿಸುವುದು

851 (905) ಶ್ರೀ ಗೋಪಾಲಕೃಷ್ಣ ಬೇಳೂರು (ಸಾಗರ) : ಮಾನ್ಯ ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜೀವಗಾಂಧಿ ವಿದ್ಯುದೀಕರಣ ಯೋಜನೆಯಡಿಯಲ್ಲಿ ಕೈಬಿಟ್ಟಿರುವ ಬಿ.ಪಿ.ಎಲ್. ಕಾರ್ಡುದಾರರಿಗೆ ಮತ್ತು ಇತರರಿಗೆ ವಿದ್ಯುತ್ ಸಂಪರ್ಕ ನೀಡ ಬೇಕಾಗಿರುತ್ತದೆ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಬಗ್ಗೆ ಸರಕಾರ ಕೈಗೊಂಡ ಕ್ರಮವೇನು?

ಕುಮಾರಿ ಶೋಭಾ ಕರಂದ್ಲಾಜೆ (ಇಂಧನ ಸಚಿವರು) :

ಅ) ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಆ) ತಾಲ್ಲೂಕು ಪಂಚಾಯಿತಿ ಕಾರ್ಯ ನಿರ್ವಾಹಣಾಧಿಕಾರಿ ಇವರಿಂದ ಅರ್ಹ ಭಾಗ್ಯಜ್ಯೋತಿ/ಕುಟೀರಜ್ಯೋತಿ ಫಲಾನುಭವಿಗಳ ಪಟ್ಟಿ ಪಡೆದು ವಿದ್ಯುತ್ ಸರಬರಾಜು ಕಂಪನಿಗಳು ಆದ್ಯತೆಯ ಮೇರೆಗೆ ವಿದ್ಯುತ್ ಸಂಪರ್ಕ ಕಲ್ಪಿಸಲು ಕ್ರಮ ಕೈಗೊಳ್ಳುತ್ತಿವೆ.

ಹೊಸದಾಗಿ ಸ್ಥಾಪಿತವಾಗಿರುವ ಪೊಲೀಸ್ ಠಾಣೆಗಳು

860 (1141) ಶ್ರೀ ಖಾದರ್ ಯು.ಟಿ. (ಮಂಗಳೂರು) : ಮಾನ್ಯ ಗೃಹ ಮತ್ತು ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?